**2ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ , ಮಾಗಡಿ**
**ಕ್ರಿಮಿನಲ್ ಪ್ರಕರಣ ಸಂಖ್ಯೆ - 971/2018**
**ಚಾಸಾ- 17 / ಪ್ರಾಸಾ - 5**

| | |
|---|---|
| ಹೆಸರು | **ಮಂಜುನಾಥ** |
| ತಂದೆಯ ಹೆಸರು | **ಕೃಷ್ಣ ಮೂರ್ತಿ** |
| ವಯಸ್ಸು | **51** |
| ಉದ್ಯೋಗ | **ಪಿ. ಎಸ್. ಐ , ಹೆಬ್ಬಗೋಡಿ ಪೋ. ಠಾಣೆ** |
| ವಿಳಾಸ | **ಹೆಬ್ಬಗೋಡಿ** |

**ದಿನಾಂಕ:14-08-2025ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ - ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

ನಾನು 2012 ನೇ ಇಸವಿಯ ನವಂಬರ್ ತಿಂಗಳಿನಿಂದ ದಿ.18-08-2018ರವರೆಗೆ ತಾವರೆಕೆರೆ ಪೋಲೀಸ್ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕಾರ್ಯನಿರ್ವಹಿಸಿದ್ದೇನೆ.

ದಿನಾಂಕ 14-12-2017 ರಂದು ರಾತ್ರಿ 8.00 ಗಂಟೆಯ ಸಮಯದಲ್ಲಿ ಪಿರ್ಯಾದುದಾರರು ಠಾಣೆಗೆ ಹಾಜರಾಗಿ ದೂರನ್ನು ನೀಡಿದ ಮೇರೆಗೆ ಠಾಣಾ ಮೊಕದ್ದಮೆ ನಂ.410/2017 ಎಂದು ನಮೂದಿಸಲಾಯಿತು. ಸದರಿ ಮೊಕದ್ದಮೆ ನಂ. ಕಲಂ 279, 304ಎ ಐಪಿಸಿ ಯ ರೀತ್ಯ ಪ್ರಕರಣ ದಾಖಲು ಮಾಡಲಾಯಿತು. ಈಗ ಸಾಕ್ಷಿಗೆ ನಿಪಿ-1ನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಸದರಿ ದೂರಿನ ಮೇರೆಗೆ ಪ್ರಥಮ ವರ್ತಮಾನ ವರದಿಯನ್ನು ಮಾಡಲಾಯಿತು. ಈಗ ಸಾಕ್ಷಿಗೆ ಪ್ರಥಮ ವರ್ತಮಾನ ವರದಿಯನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿರುತ್ತಾರೆ. ಪ್ರಥಮ ವರ್ತಮಾನ ವರದಿಯನ್ನು ನಿಪಿ-10 ಸಾಕ್ಷಿಯ ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು.

ದಿನಾಂಕ 14.12.2017 ರಂದು ರಾತ್ರಿ 8.45 ರಿಂದ 9.30ರವರೆಗೆ ಚಾಸಾ-1ರವರು ತೋರಿಸಿದ ಜಾಗದಲ್ಲಿ ನಿಪಿ-2ರಂತೆ ಪಂಚನಾಮೆಯನ್ನು ಮಾಡಿ, ಚಾಸಾ-1, 5 ರಿಂದ 7 ರವರ ಸಹಿಯನ್ನು ಪಡೆದುಕೊಳ್ಳಲಾಯಿತು. ಈಗ ಸಾಕ್ಷಿಗೆ ನಿಪಿ-02 ಅನ್ನು

ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು. ಪಂಚನಾಮೆಯನ್ನು ಮಾಡುವ ಸಮಯದಲ್ಲಿ ಕಾರಿನ ಸಂ.ಕೆಎ-03-ಪಿ-4731 ಮತ್ತು ಬಸ್ಸಿ ನ ಸಂ. ಕೆಎ-09-ಎ-6021 ನ್ನು ವಶಪಡಿಸಿಕೊಳ್ಳಲಾಯಿತು. ಅ ಮಾನತ್ತು ಮಾಡಿದ ವಾಹನಗಳನ್ನು ಮಾಲು ಪಟ್ಟಿ ಸಂ. 167/2017 ರಂತೆ ನೋಂದಣಿ ಮಾಡಲಾಯಿತು. ಈಗ ಸಾಕ್ಷಿಗೆ ಮಾಲುಪಟ್ಟಿಯನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಮಾಲುಪಟ್ಟಿಯನ್ನು ನಿಪಿ-11 ಎಂದು ಸಾಕ್ಷಿಯ ಸಹಿಯನ್ನು ನಿಪಿ-11(ಎ) ಎಂದು ಗುರುತಿಸಲಾಯಿತು. ಪಂಚನಾಮೆಯನ್ನು ಮಾಡುವ ಸಮಯದಲ್ಲಿ ಕಚ್ಚಾ ನಕ್ಷೆಯನ್ನು ತಯಾರು ಮಾಡಲಾಯಿತು. ಈಗ ಸಾಕ್ಷಿಗೆ ಕಚ್ಚಾ ನಕ್ಷೆಯನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು ಕಚ್ಚಾ ನಕ್ಷೆಯನ್ನು ನಿಪಿ-12 ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿಪಿ-12(ಎ) ಎಂದು ಗುರುತಿಸಲಾಯಿತು. ನಂತರ ಮುಂದಿನ ತನಿಖೆಗೆ ಕಡತವನ್ನು ಚಾಸಾ-18 ರವರಿಗೆ ವರ್ಗಾವಣೆ ಮಾಡಲಾಯಿತು.

**ಪಾಟೀ ಸವಾಲು - ಆರೋಪಿಯ ಪರ ಶ್ರೀ. ಜಿ. ಹೆಚ್. ಎಂ, ವಕೀಲರಿಂದ-**

ನೀವು ಚಾಸಾ-1ರವರಿಂದ ಸುಳ್ಳು ದೂರನ್ನು ಸ್ವೀಕರಿಸಿ ಸುಳ್ಳು ಎಫ್. ಐ. ಆರ್ ನ್ನು ಹಾಕಿರುತ್ತೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಪಂಚನಾಮೆಗೆ ಸಹಕರಿಸುವಂತೆ ಹೇಳಿ ನಾನು ಸಾಕ್ಷಿದಾರರಿಗೆ ಯಾವುದೇ ನೋಟಿಸ್ ನ್ನು ನೀಡಿರುವುದಿಲ್ಲ, ಆದರೆ ಮೌಖಿಕವಾಗಿ ತಿಳಿಸಿರುತ್ತೇನೆ. ನೀವು ಪಂಚನಾಮೆಯನ್ನು ಠಾಣೆಯಲ್ಲಿಯೇ ಮಾಡಿರುತ್ತೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ನಿಪಿ-12 ನ್ನು ಠಾಣೆಯಲ್ಲಿಯೇ ತಯಾರು ಮಾಡಿರುತ್ತೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ನೀವು ಮೃತರ ಕುಟುಂಬಕ್ಕೆ ಸಹಾಯ ಮಾಡುವ ಉದ್ದೇಶದಿಂದ ಚಾಸಾ-1ರವರಿಂದ ಸುಳ್ಳು ದೂರನ್ನು ದಾಖಲಿಸಿಕೊಂಡು ನಿಮಗೆ ಅನುಕೂಲ ಆಗುವಂತೆ ತನಿಖೆಯನ್ನು ಮಾಡಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

**ಮರು ವಿಚಾರಣೆ ಇರುವುದಿಲ್ಲ**

**ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,**

**2ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ,**
**ಮಾಗಡಿ**